ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/31/ಅಉಅ/2018-19/ನೇವಿ-1

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:16.07.2018.

**ಸುತ್ತೋಲೆ**

ವಿಷಯ: 2018-19ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ ಹೆಚ್ಚುವರಿ ಬೋಧನಾ ಕಾರ್ಯಭಾರಕ್ಕೆ ಅತಿಥಿ ಉಪನ್ಯಾಸಕರುಗಳನ್ನು ಆಯ್ಕೆ ಮಾಡಿಕೊಳ್ಳುವ ಬಗ್ಗೆ.

ಉಲ್ಲೇಖ: (1) ಸರ್ಕಾರದ ಪತ್ರ ಸಂಖ್ಯೆ:ಇಡಿ/139/ಡಿಸಿಇ/2018, ದಿನಾಂಕ:02.07.2018.

(2) ಈ ಕಛೇರಿಯ ಸಮಸಂಖ್ಯೆಯ ದಿನಾಂಕ:03.07.2018ರ ಸುತ್ತೋಲೆ.

* * * * * * *

2018-19ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಅತಿಥಿ ಉಪನ್ಯಾಸಕರುಗಳನ್ನು ಆಯ್ಕೆ ಮಾಡಿಕೊಳ್ಳುವ ಬಗ್ಗೆ ಉಲ್ಲೇಖ(2)ರ ಈ ಕಛೇರಿಯ ಸುತ್ತೋಲೆಯನ್ನು ಭಾಗಶ: ಮಾರ್ಪಡಿಸಿ, ಈ ಕೆಳಕಂಡಂತೆ ಆದೇಶಿಸಲಾಗಿದೆ.

(1) ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಯಂ ಉಪನ್ಯಾಸಕರಿಗೆ ಕಾರ್ಯಭಾರ ಹಂಚಿಕೆ ಮಾಡಿ ಉಳಿಕೆ ಇರುವ ಹೆಚ್ಚುವರಿ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು ಪ್ರತಿ ವರ್ಷ ತಾತ್ಕಾಲಿಕವಾಗಿ ಅತಿಥಿ ಉಪನ್ಯಾಸಕರ ಸೇವೆಯನ್ನು ಬಳಸಿಕೊಳ್ಳಲಾಗುತ್ತಿದ್ದು, ಪ್ರಸ್ತುತ 2018-19ನೇ ಶೈಕ್ಷಣಿಕ ಸಾಲಿಗೆ, 2017-18ನೇ ಶೈಕ್ಷಣಿಕ ಸಾಲಿನಲ್ಲಿ ಕರ್ತವ್ಯ ನಿರ್ವಹಿಸಿರುವ ಅತಿಥಿ ಉಪನ್ಯಾಸಕರುಗಳನ್ನು ಇಲಾಖಾ ವತಿಯಿಂದ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿರುವವರ ಸೇವೆಯನ್ನು ಬಳಸಿಕೊಳ್ಳತಕ್ಕದ್ದು. ಒಂದು ವೇಳೆ 2017-18ನೇ ಸಾಲಿನಲ್ಲಿ ಕರ್ತವ್ಯ ನಿರ್ವಹಿಸಿರುವ ಅತಿಥಿ ಉಪನ್ಯಾಸಕರುಗಳಿಗೆ 2018-19ನೇ ಸಾಲಿನಲ್ಲಿ ಅದೇ ಕಾಲೇಜಿನಲ್ಲಿ ಮುಂದುವರೆಯಲು ಅವಕಾಶ ಇಲ್ಲದಿದ್ದಲ್ಲಿ, ಅವರುಗಳನ್ನು ಇತರೇ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ 2017-18ನೇ ಸಾಲಿನಲ್ಲಿ ಸೇವೆ ಸಲ್ಲಿಸಿರುವವರನ್ನು ಮುಂದುವರೆಸಿದ ನಂತರ ಅಗತ್ಯತೆ ಇದ್ದಲ್ಲಿ ಆದ್ಯತೆ ಮೇರೆಗೆ ಸೇವೆಯಲ್ಲಿ ಮುಂದುವರೆಸುವುದು.

(2) 2017-18ನೇ ಶೈಕ್ಷಣಿಕ ಸಾಲಿನಲ್ಲಿ ಕರ್ತವ್ಯ ನಿರ್ವಹಿಸಿರುವ ಅತಿಥಿ ಉಪನ್ಯಾಸಕರುಗಳ ಸೇವೆಯನ್ನು ಬಳಸಿಕೊಂಡ ನಂತರ, ಉಳಿಕೆ ಇರುವ ಕಾರ್ಯಭಾರಕ್ಕೆ ಈ ಕೆಳಗೆ ತಿಳಿಸಿರುವ ಮಾನದಂಡಗಳನ್ವಯ ಪ್ರತಿಭಾ ಆಧಾರದ ಮೇಲೆ ಅತಿಥಿ ಉಪನ್ಯಾಸಕರುಗಳನ್ನು ಆಯ್ಕೆ ಮಾಡಿಕೊಳ್ಳತಕ್ಕದ್ದು.

| ಕ್ರಮ ಸಂಖ್ಯೆ | ವಿದ್ಯಾರ್ಹತೆ | | ಗರಿಷ್ಠ ಅಂಕಗಳು |
|---|---|---|---|
| ಅ) | ಸಾಮಾನ್ಯ ವಿದ್ಯಾರ್ಹತೆ:<br>ಅಭ್ಯರ್ಥಿಯು ಎರಡು ವರ್ಷ ಸ್ನಾತಕೋತ್ತರ ಪದವಿಯಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳ 35% ನ್ನು ಗಣನೆಗೆ ತೆಗೆದುಕೊಳ್ಳುವುದು. (ಉದಾ: ಅಭ್ಯರ್ಥಿಯು ಸ್ನಾತಕೋತ್ತರ ಪದವಿಯಲ್ಲಿ ಶೇಕಡ 60 ಅಂಕ ಪಡೆದಿದ್ದಲ್ಲಿ ಅದರ ಶೇಕಡ 35ರಷ್ಟು ಭಾಗವನ್ನು ಅಂದರೆ 21 ಅಂಕಗಳು ಎಂಬುದಾಗಿ ಗಣನೆಗೆ ತೆಗೆದುಕೊಳ್ಳುವುದು). | – | 35 ಅಂಕಗಳು |
| ಆ) | 1) ಪಿಹೆಚ್.ಡಿ ವಿದ್ಯಾರ್ಹತೆ ಪಡೆದಿದ್ದಲ್ಲಿ<br>2)ಎನ್ಇಟಿ/ಎಸ್ಎಲ್ಇಟಿ ವಿದ್ಯಾರ್ಹತೆ ಪಡೆದಿದ್ದಲ್ಲಿ<br>3)ಎಂ.ಫಿಲ್. ವಿದ್ಯಾರ್ಹತೆ ಪಡೆದಿದ್ದಲ್ಲಿ | – | 15 ಅಂಕಗಳು<br>12 ಅಂಕಗಳು<br>08 ಅಂಕಗಳು |
| ಇ) | ಹಿಂದಿನ ವರ್ಷಗಳಲ್ಲಿ ಸರ್ಕಾರಿ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಅವಧಿಗೆ ಪ್ರತಿ ಶೈಕ್ಷಣಿಕ ವರ್ಷಕ್ಕೆ 3 ಅಂಕಗಳಂತೆ ಗರಿಷ್ಠ 10 ವರ್ಷಗಳಿಗೆ, 30 ಅಂಕಗಳನ್ನು ಮಿತಿಗೊಳಿಸುವುದು (ಪ್ರತಿ ಶೈಕ್ಷಣಿಕ ವರ್ಷದ ಪೂರ್ಣ ಅವಧಿ ಸೇವೆಗೆ 3 ಅಂಕಗಳು, ಶೈಕ್ಷಣಿಕ ವರ್ಷದಲ್ಲಿ 1 ಸೆಮಿಸ್ಟರ್‌ನಲ್ಲಿ ಮಾತ್ರ ಸೇವೆ ಸಲ್ಲಿಸಿದ್ದರೆ 1.5 ಅಂಕಗಳು) | – | 30 ಅಂಕಗಳು |
| | ಒಟ್ಟು | | 100 ಅಂಕಗಳು |
| ಸೂಚನೆ: ವಿಕಲಚೇತನ ಅಭ್ಯರ್ಥಿಗಳಿಗೆ 10 ಅಂಕಗಳನ್ನು ಹೆಚ್ಚುವರಿಯಾಗಿ ನೀಡುವುದು ಹಾಗೂ ಆಯ್ಕೆ ಸಂದರ್ಭದಲ್ಲಿ ಆದ್ಯತೆ ನೀಡುವುದು. | | | |

ಮೇಲೆ ತಿಳಿಸಿರುವಂತೆ, 2018–19ನೇ ಸಾಲಿಗೆ ಅತಿಥಿ ಉಪನ್ಯಾಸಕರುಗಳನ್ನು ಪಾರದರ್ಶಕವಾಗಿ ಕೂಡಲೇ ಆಯ್ಕೆ ಮಾಡಿಕೊಳ್ಳುವಂತೆ ಸೂಚಿಸಲಾಗಿದೆ.

ಕಾಲೇಜು ಶಿಕ್ಷಣ ಆಯುಕ್ತರು

<u>ಇವರಿಗೆ,</u>

1) ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2) ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
3) ಮಾಹಿತಿ & ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು–ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ ಮತ್ತು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.

<u>ಪ್ರತಿಯನ್ನು:</u>

1) ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2) ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ (ಉನ್ನತ) ಇಲಾಖೆ, ಬೆಂಗಳೂರು.
3) ಜಂಟಿ ನಿರ್ದೇಶಕರು (ಶೈಕ್ಷಣಿಕ), ಮ್ಯಾನೇಜರ್, ವರ್ಗಾವಣೆ & ನಿಯೋಜನೆ ವಿಭಾಗ ಹಾಗೂ ಸಂಬಂಧಪಟ್ಟ ವಿಭಾಗಗಳ ಮ್ಯಾನೇಜರ್/ಅಧೀಕ್ಷಕರುಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು.
4) ಕೇಂದ್ರ ಕಛೇರಿಯ ಎಲ್ಲಾ ಅಧಿಕಾರಿಗಳ ಆಪ್ತ ಶಾಖೆಗೆ.
5) ಕಛೇರಿ ಪ್ರತಿ